# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ
ಟಿ.ದಾಸರಹಳ್ಳಿ ಉಪ ವಿಭಾಗ, ದಾಸರಹಳ್ಳಿ ವಲಯ
ಮಾರಮ್ಮ ದೇವಸ್ಥಾನದ ಹತ್ತಿರ, ಬಾಗಲಗುಂಟೆ

ಸಂಖ್ಯೆ:ಬೃ.ಬೆಂ.ಮ.ಪಾ/ದಾ.ವ/ಸ.ಅ/ವಾ.14/ಪಿಆರ್:45:2022-23 ದಿನಾಂಕ:20.08.2022

## ಬಾಗಲಗುಂಟೆ ವಾರ್ಡ್-14 ಸಮಿತಿ ಸಭೆಯ ನಡವಳಿಗಳು

ಮಾನ್ಯ ಮುಖ್ಯ ಆಯುಕ್ತರು, ಬಿಬಿಎಂಪಿ ರವರ ಕಛೇರಿ ಆದೇಶ ಸಂಖ್ಯೆ:ಬಿ12(5)/ಪಿಆರ್/35/2020-21, ದಿ.16.04.2021ರ ಆದೇಶದಂತೆ ದಿ.20.08.2022 ರಂದು ನಡೆದ ಬಾಗಲಗುಂಟೆ ವಾರ್ಡ್ ನಂ.14ರ ವಾರ್ಡ್ ಸಮಿತಿ ಸಭೆಯ ನಡವಳಿಗಳು:-

ಸಭೆಗೆ ಹಾಜರಾಗಿದ್ದವರ ವಿವರಗಳು:-

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ |
|---|---|---|
| 1 | ಶ್ರೀ.ಕೆ.ಮರುಳಸಿದ್ದಪ್ಪ | ಕಾರ್ಯಪಾಲಕ ಅಭಿಯಂತರರು, ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡೆಲ್ ಅಧಿಕಾರಿಗಳು |
| 2 | ಶ್ರೀ.ವೆಂಕಟೇಶಪ್ಪ | ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು, ವಾರ್ಡ್ ನಂ.14, ಬಾಗಲಗುಂಟೆ |
| 3 | ಶ್ರೀ.ಧನಂಜಯ | ಸಹಾಯಕ ಕಂದಾಯ ಅಧಿಕಾರಿ, ದಾಸರಹಳ್ಳಿ ವಲಯ |
| 4 | ಶ್ರೀ.ಡಾ||ಹರ್ಷಿತ್ | ಆರೋಗ್ಯಾಧಿಕಾರಿಗಳು, ಬಿಬಿಎಂಪಿ |
| 5 | ಶ್ರೀ.ಮೋಹನ್ ಗೌರೋಜಿ | ಹಿರಿಯ ಆರೋಗ್ಯ ಪರಿವೀಕ್ಷಕರು |
| 6 | ಶ್ರೀಮತಿ.ಡಿ ಜ್ಯೋತಿ | ಕಿರಿಯ ಅಭಿಯಂತರರು ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ |
| 7 | ಶ್ರೀ.ರವಿಕುಮಾರ್ ಆರ್ | ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ |
| 8 | ಶ್ರೀ.ಮಂಜುನಾಥ್ ಡಿ | ವಾಟರ್ ಇನ್ಸ್‌ಪೆಕ್ಟರ್, ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ |
| 9 | ಶ್ರೀ.ಬಿ.ಕೃಷ್ಣಮೂರ್ತಿ | ಡಿಫೆನ್ಸ್ ಕಾಲೋನಿ, ನಾಗರೀಕ ಕ್ಷೇಮಾಭಿವೃದ್ಧಿ ಸಂಘ |
| 10 | ಶ್ರೀ.ವಿ.ರಾಮೇಗೌಡ | ನಾಗರೀಕ ಹಿತ ರಕ್ಷಣಾ ಸಮಿತಿ, ಭುವನೇಶ್ವರಿನಗರ |
| 11 | ಶ್ರೀ.ಶಿವಲಿಂಗಯ್ಯ | ಕಂದಾಯ ಇಲಾಖೆ, ಬಿಬಿಎಂಪಿ |
| 12 | ಶ್ರೀ.ಕೃಷ್ಣಪ್ಪ | ಅರಣ್ಯ ಇಲಾಖೆ ಬಿಬಿಎಂಪಿ |
| 13 | ಶ್ರೀ.ಆನಂದ ಜಿ | ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.19 ಡಿಫೆನ್ಸ್ ಕಾಲೋನಿ |
| 14 | ಶ್ರೀ.ರಂಗನಾಥ್ | ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.18 ಬಾಗಲಗುಂಟೆ |
| 15 | ಶ್ರೀ.ಜ್ಯೋತಿ ಬಾಬು | ಎಸ್.ಡಬ್ಲ್ಯೂ.ಎಂ ಮೇಲ್ವಿಚಾರಕರು |
| 16 | ಶ್ರೀ.ರವಿ | ಎಸ್.ಡಬ್ಲ್ಯೂ.ಎಂ ಮೇಲ್ವಿಚಾರಕರು |

ನೋಡಲ್ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದ ವಾರ್ಡ್ ಸಭೆಯ ಸದಸ್ಯರು, ಹಾಜರಿದ್ದ ಅಧಿಕಾರಿಗಳನ್ನು ಹಾಗೂ ವಿವಿಧ ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ಪ್ರಾರಂಭಿಸಿದರು.

ಈ ಹಿಂದಿನ ಸಭೆಯ ಸಭಾ ನಡವಳಿಯನ್ನು ಚರ್ಚಿಸಿ, ಬಾಕಿ ಇರುವ ಕುಂದು ಕೊರತೆಗಳನ್ನು ಆಧ್ಯತೆಯ ಮೇಲೆ ಪೂರೈಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ನೋಡಲ್ ಅಧಿಕಾರಿಗಳು ಸೂಚಿಸಿದರು.

- **ಬಿ.ಡಬ್ಲ್ಯೂ.ಎಸ್.ಎಸ್.ಬಿ ಗೆ ಸಂಬಂಧಪಟ್ಟ ವಿಷಯದ ಬಗ್ಗೆ.**

➢ ಬಾಗಲಗುಂಟೆ ವಾರ್ಡ್ ವ್ಯಾಪ್ತಿಯಲ್ಲಿ ಮಳೆ ನೀರನ್ನು ಸ್ಯಾನಿಟರಿ ಪೈಪ್‌ಗೆ ಬಿಡದೆ ರಸ್ತೆಬದಿಯಲ್ಲಿರುವ ಚರಂಡಿಗಳಿಗೆ ಬಿಡಬೇಕೆಂದು ಈಗಾಗಲೇ ಬಿ.ಡಬ್ಲ್ಯೂ.ಎಸ್.ಎಸ್.ಬಿ ವತಿಯಿಂದ ನೋಟೀಸ್ ನೀಡಲಾಗಿದ್ದು, ಅದರಂತೆ ಎಲ್ಲರೂ ಸಹಕರಿಸಲು ಕೋರಿದರು.

➢ ಒಳಚರಂಡಿ ವ್ಯವಸ್ಥೆಗಾಗಿ ಪೈಪ್‌ಲೈನ್ ಅಳವಡಿಸಲು ರಸ್ತೆಯನ್ನು ಬಿ.ಡಬ್ಲ್ಯೂ.ಎಸ್.ಎಸ್.ಬಿ ವತಿಯಿಂದ ಕತ್ತರಿಸಿರುವುದು ಕಂಡುಬಂದಿರುತ್ತದೆ. ಸದರಿ ವಿಷಯಗಳ ದುರಸ್ಥಿ ಕಾರ್ಯವನ್ನು ತುರ್ತಾಗಿ ನಿರ್ವಹಿಸಲು ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯವರಿಗೆ ಸೂಚಿಸಲಾಯಿತು.

ಕ್ರಮ: ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ

- **ಕಂದಾಯ ಇಲಾಖೆಗೆ ಸಂಬಂಧಪಟ್ಟ ವಿಷಯದ ಬಗ್ಗೆ.**

➢ ಆಧಾರ್ ಕಾರ್ಡ್‌ಗಳನ್ನು ಗುರುತಿನ ಚೀಟಿಗೆ ಲಿಂಕ್ ಮಾಡುವ ಬಗ್ಗೆ ಮನೆಮನೆಗೆ ಹೋಗಿ ಪ್ರಚಾರ ಮಾಡಿ, ಕಾರ್ಯ ಪ್ರವೃತ್ತರಾಗಬೇಕೆಂದು ಸರ್ವಾನುಮತದಿಂದ ತೀರ್ಮಾನಿಸಿ, ಅದರಂತೆ ಕ್ರಮವಹಿಸಲು ಸಂಬಂಧಪಟ್ಟ ಇಲಾಖೆಗೆ ಸೂಚಿಸಲಾಯಿತು.

ಕ್ರಮ:ಕಂದಾಯ ಇಲಾಖೆ, ಸ.ಕಂ.ಅ, ವಾ-14/ಸದಸ್ಯ ಕಾರ್ಯದರ್ಶಿ

- **ಘನತ್ಯಾಜ್ಯ ನಿರ್ವಹಣೆ ಬಗ್ಗೆ.**

ಕಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಪರಿಣಾಮಕಾರಿಯಾಗಿ ಘನತ್ಯಾಜ್ಯ ವಿಲೇವಾರಿ ಮಾಡಲು ಕ್ರಮವಹಿಸುತ್ತಿರುವುದಾಗಿ ಸಭೆಗೆ ತಿಳಿಸಿದರು. 35 ಆಟೋಗಳು 35 ಬ್ಲಾಕ್‌ಗಳಲ್ಲಿ ಸಮರ್ಪಕವಾಗಿಕಾರ್ಯ ನಿರ್ವಹಿಸುತ್ತಿರುವುದಾಗಿ ತಿಳಿಸಿದರು ಹಾಗೂ ಸಂಬಂಧಿಸಿದ ಗುತ್ತಿಗೆದಾರರು ಹಾಗೂ ಮೇಲ್ವಿಚಾರಕರುಗಳು ಹಾಜರಿದ್ದು, ಘನತ್ಯಾಜ್ಯವನ್ನು ಸಮರ್ಪಕವಾಗಿ ವಿಲೇವಾರಿ ಮಾಡಲು ಸೂಚಿಸಲಾಯಿತು.

ಬಾಗಲಗುಂಟೆ ವ್ಯಾಪ್ತಿಯಲ್ಲಿ ಕಸಕ್ಕೆ ಬೆಂಕಿ ಹಚ್ಚುವುದನ್ನು ನಿಯಂತ್ರಿಸಲು ಸಂಬಂಧಪಟ್ಟ ಘನತ್ಯಾಜ್ಯ ಇಲಾಖೆಯ ಮೇಲ್ವಿಚಾರಕರಿಗೆ ಸೂಚಿಸಲಾಯಿತು.

ಕ್ರಮ:ಸ.ಕಾ.ಇ.ಅ (ಘ.ತ್ಯಾ.ವಿ)/ಹಿರಿಯ/ಕಿರಿಯ ಆರೋಗ್ಯ ನಿರೀಕ್ಷಕರು

- **ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ.**

ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್-19 ಸಂಬಂಧಿಸಿದಂತೆ, ಆರೋಗ್ಯ ಪರಿವೀಕ್ಷಕರು ಈ ಕೆಳಕಂಡಂತೆ ಮಾಹಿತಿ ಒದಗಿಸಿದರು.

| | |
|---|---|
| ಒಟ್ಟು ಪ್ರಕರಣಗಳು | 9175 |
| ಬಿಡುಗಡೆಯಾದ ಪ್ರಕರಣಗಳು | 9006 |
| ಸಕ್ರಿಯ ಪ್ರಕರಣಗಳು | 06 |
| ಮರಣ | 161 |

ಇರುತ್ತದೆಂದು ಹಾಗೂ ಸಧ್ಯದ ಪರಿಸ್ಥಿತಿಯಲ್ಲಿ 12 ರಿಂದ 14 ವರ್ಷದ ವಯಸ್ಸಿನ ಲಸಿಕೆ ಹಾಕುವ ಕಾರ್ಯಕ್ರಮ ನಡೆಯುತ್ತಿದ್ದು, ಶೇ.100% ಲಸಿಕೆಯನ್ನು ನೀಡಲಾಗಿದೆ ಮತ್ತು 15-18 ವಯಸ್ಸಿನವರಿಗೆ 90% ಹಾಗೂ ಬೂಸ್ಟರ್ ಡೋಸ್ 96% (60 ವಯಸ್ಸಿನ ಮೇಲ್ಪಟ್ಟವರಿಗೆ) ನೀಡಲಾಗಿದೆ ಎಂದು ಹಿರಿಯ ಆರೋಗ್ಯ ಪರಿವೀಕ್ಷಕರಾದ ಶ್ರೀ.ಮೋಹನ್ ಗೌರೋಜಿ ರವರು ತಿಳಿಸಿದರು. ಹಾಗೂ ಪಾಲಕರು ಮಕ್ಕಳನ್ನು ಆಸ್ಪತ್ರೆಯ ಹತ್ತಿರ ಕರೆ ತಂದು ಲಸಿಕೆ ಹಾಕಿಸಲು ವಾರ್ಡ್‌ನ ನಿವಾಸಿಗಳಿಗೆ ತಿಳಿಸಲು ವಾರ್ಡ್ ಸಮಿತಿ ಸದಸ್ಯರಿಗೆ ಕೋರಲಾಯಿತು.

ಸಧ್ಯದ ಪರಿಸ್ಥಿತಿಯಲ್ಲಿ ಡೆಂಗ್ಯೂ ಪ್ರಕರಣಗಳು ಹೆಚ್ಚಾಗುತ್ತಿದ್ದು, ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ಔಷಧಿಯನ್ನು ಸಿಂಪಡಿಸಲು, ತುರ್ತು ಕ್ರಮವಹಿಸಲು ಸೂಚಿಸಲಾಯಿತು.

ಕ್ರಮ: ಕೋವಿಡ್ ಆರೋಗ್ಯ ವೈಧ್ಯಾಧಿಕಾರಿಗಳು/ ಹಿರಿಯ ಆರೋಗ್ಯ ಪರಿವೀಕ್ಷಕರು.

- **ಇತರೆ ವಿಷಯಗಳ ಬಗ್ಗೆ.**

➢ ಬಿಬಿಎಂಪಿ ಮಾರ್ಷಲ್‌ಗಳು ಕಳಪೆ ಗುಣಮಟ್ಟದ ಪ್ಲಾಸ್ಟಿಕ್ ಬಳಸುತ್ತಿರುವ ಅಂಗಡಿ ಮಾಲೀಕರುಗಳು, ಬೀದಿಬದಿ ವ್ಯಾಪಾರಿಗಳಿಗೆ ಇನ್ನಿತರೆಯವರುಗಳಿಗೆ ದಂಡ ವಿಧಿಸುತ್ತಿರುವುದಾಗಿ ಬಿಬಿಎಂಪಿ ಮಾರ್ಷಲ್‌ಗಳು ತಿಳಿಸಿದರು.

➢ ಕಂದಾಯ ಇಲಾಖೆಯವರು ಖಾತದಾರರ ಪರಿಷ್ಕರಣೆ ವಿಷಯದ ಬಗ್ಗೆ ಚರ್ಚಿಸಿದರು.

ಸ.ಅ ವಾ.14/ ಸ.ಕಾ.ನಿ.ಅ (ದಾಸರಹಳ್ಳಿ ಉಪ-ವಿಭಾಗ)

**ಸಹಾಯಕ ಅಭಿಯಂತರರು**
**ಹಾಗೂ ಸದಸ್ಯ ಕಾರ್ಯದರ್ಶಿ ವಾರ್ಡ್ ಸಮಿತಿ**

**ನೋಡಲ್ ಅಧಿಕಾರಿ ಹಾಗೂ**
**ವಾರ್ಡ್ ಸಮಿತಿ ಅಧ್ಯಕ್ಷರು, ವಾ.ನಂ.14, ಬಾಗಲಗುಂಟೆ**
**ಮತ್ತು ಕಾರ್ಯಪಾಲಕ ಅಭಿಯಂತರರು**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

ಅಧಿಕಾರಿಗಳ ಮಾಹಿತಿಗಾಗಿ:-

1) ಸನ್ಮಾನ್ಯ ಶ್ರೀ.ಆರ್.ಮಂಜುನಾಥ್ ರವರು, ಮಾನ್ಯ ಶಾಸಕರು, ದಾಸರಹಳ್ಳಿ ವಿಧಾನ ಸಭಾ ಕ್ಷೇತ್ರ ರವರ ಮಾಹಿತಿಗಾಗಿ ಸಲ್ಲಿಸಲಾಗಿದೆ.
2) ಮಾನ್ಯ ವಲಯ ಆಯುಕ್ತರು, ದಾಸರಹಳ್ಳಿ ವಲಯ, ಬಿ.ಬಿ.ಎಂ.ಪಿ, ಬೆಂಗಳೂರು ರವರ ಅವಗಾಹನೆಗಾಗಿ ಮಂಡಿಸಿದೆ.
3) ಮಾನ್ಯ ಜಂಟಿ ಆಯುಕ್ತರು (ದಾಸರಹಳ್ಳಿ) ವಲಯ ರವರ ಅವಗಾಹನೆಗಾಗಿ ಮಂಡಿಸಿದೆ.
4) ಮುಖ್ಯ ಅಭಿಯಂತರರು, (ದಾಸರಹಳ್ಳಿ) ವಲಯರವರ ಅವಗಾಹನೆಗಾಗಿ ಮಂಡಿಸಿದೆ.
5) ಆರೋಗ್ಯ ವೈಧ್ಯಾಧಿಕಾರಿಗಳು (ದಾಸರಹಳ್ಳಿ) ವಲಯ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
6) ವಲಯ ಅರಣ್ಯಾಧಿಕಾರಿಗಳು, ದಾಸರಹಳ್ಳಿ ವಲಯ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
7) ಕಾರ್ಯಪಾಲಕ ಅಭಿಯಂತರರು, ದಾ.ವಿ ರವರ ಮಾಹಿತಿಗಾಗಿ ಕಳುಹಿಸಿದೆ.
8) ಸಹಾಯಕ ಕಾರ್ಯಪಾಲಕ ಅಭಿಯಂತರರು (ಟಿ.ದಾ.ಉ.ವಿ) ರವರ ಮಾಹಿತಿಗಾಗಿ ಕಳುಹಿಸಿದೆ.
9) ಸಹಾಯಕ ಕಂದಾಯ ಅಧಿಕಾರಿ (ದಾ.ಉ.ವಿ) ಬಿಬಿಎಂಪಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಿದೆ.
10) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಗೆ ಸಲ್ಲಿಸಿದೆ.
11) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಕಳುಹಿಸಿದೆ.
12) ಹಿರಿಯ / ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ. 14 ರವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
13) ಕಲ್ಯಾಣಾಧಿಕಾರಿಗಳು (ದಾವ) ಬಿಬಿಎಂಪಿ ರವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
14) ಕಛೇರಿ ಪ್ರತಿ.